**ದಿನಾಂಕ: 04.09.2021 ರಂದು ಮದ್ಯಾಹ್ನ 3:00 ಗಂಟೆಗೆ ವಾರ್ಡ್ ಸಂಖ್ಯೆ 167 ಯಡಿಯೂರು ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

**ಹಾಜರಿದ್ದ ಅಧಿಕಾರಿಗಳು:-**

1. ಡಾ॥ ರಾಘವೇಂದ್ರ ಪ್ರಸಾದ್ - ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಯತೀಶ್.ಎ.ಜೆ - ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 167 ಯಡಿಯೂರು)
3. ಶ್ರೀ. ಮಂಜುನಾಥ್. ಆರ್ - ಹಿ.ಆ.ಪ- (ವಾರ್ಡ್ 167 ಯಡಿಯೂರು)
4. ಶ್ರೀ. ನರಸಿಂಹಲು - ಕಿ.ಆ.ಪ- (ವಾರ್ಡ್ 167 ಯಡಿಯೂರು)

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 167 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡಿನಲ್ಲಿ ರಸ್ತೆಗುಂಡಿಗಳ ಬಗ್ಗೆ ಚರ್ಚಿಸಲಾಗಿ ಹೊಸದಾಗಿ ಗುರುತಿಸಲಾದ ರಸ್ತೆಗುಂಡಿಗಳನ್ನು ಜಲಮಂಡಳಿ ಅಗೆತಗಳು ಹಾಗೂ ಇನ್ನಿತರೆ ಅಗೆತಗಳಿಗೆ ಸಂಬಂಧಪಟ್ಟಿರುವುದರಿಂದ ರಸ್ತೆಗುಂಡಿಗಳನ್ನು ಮುಚ್ಚಲು ಅಗತ್ಯಕ್ರಮ ಕೈಗೊಳ್ಳುವ ಬಗ್ಗೆ ಅಧ್ಯಕ್ಷರು ರವರು ತುರ್ತಾಗಿ ನಿರ್ವಹಿಸಲು ಜಲಮಂಡಳಿ ಅಧಿಕಾರಿಗಳಿಗೆ ಸೂಚಿಸಲಾಯಿತು.

ಮೇಲಿನ ವಿಷಯಗಳ ಬಗ್ಗೆ ಶ್ರೀ. ಯತೀಶ್. ಎ.ಜೆ ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸದಸ್ಯರಿಗೆ ಮತ್ತು ಅಧ್ಯಕ್ಷರಿಗೆ ವಿವರಿಸಿದರು.

ವಾರದಲ್ಲಿ 2 ಬಾರಿ ಮಾತ್ರ ರಸ್ತೆಯನ್ನು ಸ್ವಚ್ಛಗೊಳಿಸುವುದರಿಂದ ವಾರ್ಡಿನ ರಸ್ತೆಗಳಲ್ಲಿ ಬೀಳುವ ಎಲೆಗಳು, ಒಣ ತ್ಯಾಜ್ಯಗಳು ಹೆಚ್ಚಾಗಿ ಉತ್ಪತ್ತಿಯಾಗುವುದರಿಂದ ರಸ್ತೆಯಲ್ಲಿ ತ್ಯಾಜ್ಯವು ಹೆಚ್ಚಾಗಿ ರಸ್ತೆಯಲ್ಲಿ ಉಳಿಯುವ ಸಂಭವ ಇರುತ್ತದೆಂದು ಅಭಿಪ್ರಾಯ ವ್ಯಕ್ತಪಡಿಸಿರುತ್ತಾರೆ.

Scanned with CamScanner

ವಾರ್ಡ್ ಸಂಖ್ಯೆ 167 ರಲ್ಲಿನ ಎಲ್ಲಾ ಭಾಗಗಳ ಘನತ್ಯಾಜ್ಯ ವಿಲೇವಾರಿಯು ಸಮರ್ಪಕವಾಗಿ ನಡೆಯುತ್ತಿರುತ್ತದೆ. ಆ ಕಾರ್ಯ, ಸಿವಿಲ್ ಕಾಮಗಾರಿಗಳು ಹಾಗೂ ಇನ್ನಿತರೆ ಕೆಲಸ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿದ್ದು ಮುಂದಿನ ದಿನಗಳಲ್ಲಿ ಇದೇ ರೀತಿ ಮುಂದುವರೆಸುವಂತೆ ಅಭಿಪ್ರಾಯಿಸಿದರು.

ಸಮಿತಿ ಸದಸ್ಯರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಎಲ್ಲಾ ರೀತಿಯ ಮೂಲಭೂತ ಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳ ಶ್ರಮ ಹಾಗೂ ತುರ್ತು ಸ್ಪಂದನೆ ಬಗ್ಗೆ ಮೆಚ್ಚುಗೆ ವ್ಯಕ್ತ ಪಡಿಸಿದರು.

ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಾಂ, ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ, ಕಾಮಗಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ ಸಂಖ್ಯೆ 167 ರಲ್ಲಿನ ಎಲ್ಲಾ ಭಾಗಗಳ ಘನತ್ಯಾಜ್ಯ ವಿಲೇವಾರಿಯು ಸಮರ್ಪಕವಾಗಿ ನಡೆಯುತ್ತಿರುತ್ತದೆ. ಆ ಕಾರ್ಯ, ಸಿವಿಲ್ ಕಾಮಗಾರಿಗಳು ಹಾಗೂ ಇನ್ನಿತರೆ ಕೆಲಸ ಕಾರ್ಯಗಳು ಸಮರ್ಪಕವಾಗಿ ನಡೆಯುತ್ತಿದ್ದು ಮುಂದಿನ ದಿನಗಳಲ್ಲಿ ಇದೇ ರೀತಿ ಮುಂದುವರೆಸುವಂತೆ ಅಭಿಪ್ರಾಯಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಡಾ॥. ರಾಘವೇಂದ್ರ ಪ್ರಸಾದ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 167

Scanned with CamScanner